# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಿ.ಎಸ್ಸಿ ನರ್ಸಿಂಗ್, ಜಿ.ಎನ್.ಎಂ. ಹಾಗೂ ಪ್ಯಾರಾ ಮೆಡಿಕಲ್ ಕೋರ್ಸುಗಳಿಗೆ ಪ್ರವೇಶ ಪಡೆದ/ಪಡೆಯುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿ ಶುಲ್ಕ ಮತ್ತು ಶಿಷ್ಯವೇತನ ನೀಡುವ ಕುರಿತು.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ ಸಕಇ 85 ಎಸ್‌ಎಲ್‌ಸಿ 2009(ಭಾಗ) ದಿನಾಂಕ 16-7-2010
2) ಸರ್ಕಾರದ ಆದೇಶ ಸಂಖ್ಯೆ ಸಕಇ 85 ಎಸ್‌ಎಲ್‌ಪಿ 2009 ದಿನಾಂಕ 3-12-2010
3) ಸರ್ಕಾರದ ಆದೇಶ ಸಂಖ್ಯೆ ಸಕಇ 96 ಬಿಎಂಎಸ್ 2011 ದಿನಾಂಕ 22-9-2011
4) ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಏಕಕಡತದಲ್ಲಿ ಸಲ್ಲಿಸಿರುವ ಪ್ರಸ್ತಾವನೆ ಸಂಖ್ಯೆ: ಹಿಂವಕ:ತರಬೇತಿ: ನರ್ಸಿಂಗ್:ಸಿಆರ್-1/13-14. ದಿನಾಂಕ 18-09-2013

**ಪ್ರಸ್ತಾವನೆ:**

ಮೇಲೆ ಓದಲಾದ(1) ರಲ್ಲಿ ಐ.ಎನ್.ಸಿ(Indian Nursing Council) ಯಿಂದ ಮಾನ್ಯತೆ ಪಡೆದ ನರ್ಸಿಂಗ್ ಕಾಲೇಜುಗಳಲ್ಲಿ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಬಿ.ಎಸ್.ಸಿ., ನರ್ಸಿಂಗ್ ಮತ್ತು ಜಿ.ಎನ್.ಎಂ. ಕೋರ್ಸುಗಳಲ್ಲಿ ತರಬೇತಿ ನೀಡಲು ಮಂಜೂರಾತಿ ನೀಡಿ, ವಿವಿಧ ಶಾಲಾ/ಕಾಲೇಜುಗಳಲ್ಲಿ ಸರ್ಕಾರಿ ಕೋಟಾಕ್ಕೆ ಲಭ್ಯವಿರುವ ಸೀಟುಗಳ ಮಾಹಿತಿ ಪಡೆದುಕೊಂಡು ಅಭ್ಯರ್ಥಿಗಳನ್ನು ಕೌನ್ಸಿಲಿಂಗ್ ಮುಖಾಂತರ ಆಯ್ಕೆ ಮಾಡಿ ಶಾಲಾ/ಕಾಲೇಜುಗಳಿಗೆ ನಿಯೋಜಿಸಲು ತಿಳಿಸಲಾಗಿದೆ. ಮೇಲೆ ಓದಲಾದ (2) ರಲ್ಲಿ ತರಬೇತಿ ಶುಲ್ಕ ಶಿಷ್ಯವೇತನ ಹಾಗೂ ಇತರೆ ಭತ್ಯೆಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (3) ರಲ್ಲಿ ಪ್ಯಾರಾ ಮೆಡಿಕಲ್ (ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ವಿದ್ಯಾರ್ಹತೆಗೆ) ಕೋರ್ಸುಗಳಿಗೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳನ್ನು ತರಬೇತಿಗೆ ನಿಯೋಜಿಸಲು ಆದೇಶಿಸಿದ್ದು, ತರಬೇತಿ ಶುಲ್ಕವನ್ನು ನಿಗದಿಪಡಿಸಲಾಗಿದೆ.

ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ ಬೆಂಗಳೂರು ಮತ್ತು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯವು, ಹಿಂದುಳಿದ ವರ್ಗಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸೀಟು ಹಂಚಿಕೆ ಮಾಡಿದ ಬಳಿಕ, ಸರ್ಕಾರಿ ಕೋಟಾದಲ್ಲಿ ಖಾಲಿ ಉಳಿದಿರುವ ಸ್ಥಾನಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ಅರ್ಜಿ ಆಹ್ವಾನಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದರಿಂದ ನೇರವಾಗಿ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಮೂಲಕ ಆಯ್ಕೆಯಾದ ಹಿಂದುಳಿದ ವರ್ಗಗಳ ಪ್ರತಿಭಾವಂತ ವಿದ್ಯಾರ್ಥಿಗಳು ಈ ಸೌಲಭ್ಯದಿಂದ ವಂಚಿತರಾಗುತ್ತಾರೆ ಮತ್ತು ಸರ್ಕಾರದ ಆದೇಶ ಸಂಖ್ಯೆ 16-7-2010ರ ಪ್ರಕಾರ ಕೌನ್ಸಿಲಿಂಗ್ ಮುಖಾಂತರ ಪ್ರವೇಶ ಪಡೆಯದೆ ಖಾಸಗಿ ಸಂಸ್ಥೆಗಳಲ್ಲಿ ನೇರವಾಗಿ ಸ್ವಂತ ಪ್ರವೇಶ ಪಡೆದ ಅಭ್ಯರ್ಥಿಗಳು ಈ ಯೋಜನೆಯಡಿ ಆರ್ಥಿಕ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ. ಆದ್ದರಿಂದ, 2011-12 ಮತ್ತು 2012-13ನೇ ಸಾಲಿನಲ್ಲಿ

2....

ಸರ್ಕಾರದಿಂದ ಅನುಮೋದನೆಯನ್ನು ಪಡೆದು ಐ.ಎನ್.ಸಿ.ಯಿಂದ ಮಾನ್ಯತೆ ಪಡೆದ ನರ್ಸಿಂಗ್ ಕಾಲೇಜುಗಳಲ್ಲಿ ಬಿ.ಎಸ್.ಸಿ, ನರ್ಸಿಂಗ್, ಜಿ.ಎನ್.ಎಂ. ಮತ್ತು ಪ್ಯಾರಾ ಮೆಡಿಕಲ್ ಕೋರ್ಸುಗಳಿಗೆ ಪ್ರವೇಶ ಪಡೆದ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿ ಶುಲ್ಕ ಮತ್ತು ಶಿಷ್ಯವೇತನ ನೀಡಲು ಕ್ರಮ ಕೈಗೊಳ್ಳಲಾಗಿದೆ. 2013-14ನೇ ಸಾಲಿನಿಂದ, ಇಂಡಿಯನ್ ನರ್ಸಿಂಗ್ ಕೌನ್ಸಿಲ್ ವತಿಯಿಂದ ಮಾನ್ಯತೆ ಪಡೆದ ನರ್ಸಿಂಗ್ ಶಾಲಾ ಕಾಲೇಜುಗಳಲ್ಲಿ ಬಿ.ಎಸ್ಸಿ ನರ್ಸಿಂಗ್, ಜಿಎನ್ಎಂ ಹಾಗೂ ಪ್ಯಾರಾಮೆಡಿಕಲ್ ಕೋರ್ಸುಗಳಿಗೆ ಪ್ರವೇಶವನ್ನು ಪಡೆದಿರುವ/ಪಡೆಯುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿ ಶುಲ್ಕ ಮತ್ತು ಶಿಷ್ಯವೇತನವನ್ನು ಪಾವತಿಸಲು ಅನುಮತಿ ನೀಡಿ ಸರ್ಕಾರದ ಆದೇಶವನ್ನು ಹೊರಡಿಸುವಂತೆ ಕೋರಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ (4)ರಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 612 ಬಿಎಂಎಸ್ 2013**
**ಬೆಂಗಳೂರು, ದಿನಾಂಕ:07-11-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2013-14ನೇ ಸಾಲಿನಿಂದ ಇಂಡಿಯನ್ ನರ್ಸಿಂಗ್ ಕೌನ್ಸಿಲ್ ವತಿಯಿಂದ ಮಾನ್ಯತೆ ಪಡೆದ ನರ್ಸಿಂಗ್ ಶಾಲಾ ಕಾಲೇಜುಗಳಲ್ಲಿ ಬಿ.ಎಸ್ಸಿ ನರ್ಸಿಂಗ್, ಜಿಎನ್ಎಂ ಹಾಗೂ ಪ್ಯಾರಾಮೆಡಿಕಲ್ ಕೋರ್ಸುಗಳಿಗೆ ಪ್ರವೇಶವನ್ನು ಪಡೆದಿರುವ/ಪಡೆಯುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿ ಶುಲ್ಕ ಮತ್ತು ಶಿಷ್ಯವೇತನವನ್ನು ಉಲ್ಲೇಖಿತ (2) ಮತ್ತು (3) ರಂತೆ ಪಾವತಿಸಲು ಆದೇಶಿಸಿದೆ.

ಈ ಸಂಬಂಧ ತಗಲುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2225-03-277-2-57ರಡಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 2013, ದಿನಾಂಕ: 10-05-2013ರಲ್ಲಿ ಸರ್ಕಾರದ ಇಲಾಖಾ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಬಿ.ರಘುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು
2. ಆಯುಕ್ತರು, ಹಿಂದುಳಿದ ವರ್ಗಗಳ ಕ;ಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ.

4. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ. ಬೆಂಗಳೂರು.
5. ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು } ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ
6. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು }
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
8. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-3), ವಿಧಾನ ಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.